ಜೆಎಸ್‌ಎಸ್ ಮಹಾವಿದ್ಯಾಪೀಠ

**ಜೆಎಸ್‌ಎಸ್ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಕಾಲೇಜು**

(ಮೈಸೂರು ವಿಶ್ವವಿದ್ಯಾನಿಲಯದಿಂದ ಸ್ವಾಯತ್ತತೆ ಪಡೆದಿದೆ * ನ್ಯಾಕ್‌ನಿಂದ 'ಎ' ದರ್ಜೆ ಮಾನ್ಯತೆ ಪಡೆದಿದೆ)
'ಉತ್ಕೃಷ್ಟತಾ ಅಂತಸ್ಸಾಮರ್ಥ್ಯ ಉಳ್ಳ' ಕಾಲೇಜು ಎಂದು ಯುಜಿಸಿಯಿಂದ ಗುರುತಿಸಲ್ಪಟ್ಟಿದೆ
ಊಟಿರಸ್ತೆ, ಮೈಸೂರು-570 025, ಕರ್ನಾಟಕ

☎ 0821-2548236 & 2548380 Fax: 0821-2548238 E-mail: jssautonomous@gmail.com

ದಿನಾಂಕ: 23.03.2016

**ಪ್ರಕಟಣೆ ಕೃಪೆಗಾಗಿ**

# ಹೊಸ ಹೊಸ ಸಂಶೋಧನೆಗಳ ಕ್ಷೇತ್ರ ಜೀವಶಾಸ್ತ್ರ

**– ಡಾ ಎಸ್ ಆರ್ ರಮೇಶ್**

ಮೈಸೂರು ನಗರದ ಬಿ ಎನ್ ರಸ್ತೆಯಲ್ಲಿರುವ ಜೆಎಸ್‌ಎಸ್ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಕಾಲೇಜಿನಲ್ಲಿ 2016 ರ ಮಾರ್ಚಿ 23 ರಂದು ಜೆಎಸ್‌ಎಸ್ ಮಹಾವಿದ್ಯಾಪೀಠದ ಸಂಸ್ಥಾಪಕರಾದ ಜಗದ್ಗುರು ಡಾ ಶ್ರೀ ಶಿವರಾತ್ರಿ ರಾಜೇಂದ್ರ ಮಹಾಸ್ವಾಮಿಗಳ ಜನ್ಮ ಶತಮಾನೋತ್ಸವ ಮತ್ತು ಕಾಲೇಜಿನ ಸುವರ್ಣ ಮಹೋತ್ಸವದ ಅಂಗವಾಗಿ 'ಜೈವಿಕ ವಿಜ್ಞಾನದಲ್ಲಿ ಇತ್ತೀಚಿನ ಮುನ್ನಡೆಗಳು' ಬಗ್ಗೆ ಏರ್ಪಡಿಸಿದ್ದ ರಾಜ್ಯ ಮಟ್ಟದ ವಿಚಾರ ಸಂಕಿರಣವನ್ನು ಏರ್ಪಡಿಸಲಾಗಿತ್ತು.

ಸಂಕಿರಣದ ಉದ್ಘಾಟನೆಯನ್ನು ಪ್ರೊ ಎಸ್ ಆರ್ ರಮೇಶ್, ಪ್ರಾಣಿಶಾಸ್ತ್ರ ವಿಭಾಗ, ಮೈಸೂರು ವಿಶ್ವ ವಿದ್ಯಾನಿಲಯ, ಮೈಸೂರು ಅವರು ನೆರವೇರಿಸಿದರು. ಇವರು ತಮ್ಮ ಉದ್ಘಾಟನಾ ಭಾಷಣದಲ್ಲಿ ಭಾರತೀಯ ವಿಜ್ಞಾನ ಕಾಂಗ್ರೆಸ್‌ಗೆ ಆಮಂತ್ರಣ ಪಡೆದಿದ್ದ ಸರ್ ಜಾನ್ ಗಾರ್ಡನ್, ನೋಬೆಲ್ ಪ್ರಶಸ್ತಿ ವಿಜೇತರೊಂದಿಗಿನ ತಮ್ಮ ಅನುಭವವನ್ನು ವಿವರಿಸಿದರು. ಸರ್ ಜಾನ್ ಗಾರ್ಡನ್‌ರವರ ಜೀವನಶೈಲಿ ಸರಳವಾಗಿತ್ತು. ವಿದ್ಯಾರ್ಥಿಗಳೂ ಸಹ ಸರಳ ಜೀವನ ನಡೆಸಬೇಕು ಎಂದು ಹೇಳಿದರು. ಎಲ್ಲಾ ಕ್ಷೇತ್ರಗಳಿಗೆ ಹೋಲಿಸಿದರೆ ಹೆಚ್ಚು ಆಸಕ್ತಿಕರವಾದದ್ದು ಜೀವಶಾಸ್ತ್ರ ಎಂದು ತಿಳಿಸಿದರು. ಹೊಸ ಹೊಸ ಸಂಶೋಧನೆಗಳು ನಡೆಯುವುದು ಈ ಕ್ಷೇತ್ರದಲ್ಲಿಯೇ ಎಂದು ತಿಳಿಸಿದರು.

ಕಾಲೇಜಿನ ಮುಖ್ಯಕಾರ್ಯನಿರ್ವಾಹಕರಾದ ಪ್ರೊ ಬಿ ವಿ ಸಾಂಬಶಿವಯ್ಯ ರವರು ತಮ್ಮ ಅಧ್ಯಕ್ಷೀಯ ಭಾಷಣದಲ್ಲಿ ಜೀವನದ ಬೆಳವಣಿಗೆ ಮತ್ತು ಜೀವ ಪರಿಸರದ ಬಗ್ಗೆ ಮಾತನಾಡಿದರು. ಸುವರ್ಣ ಮಹೋತ್ಸವ ಸಮಿತಿ ಕಾರ್ಯದರ್ಶಿಗಳಾದ ಪ್ರೊ ಡಿ ಎಸ್ ಸದಾಶಿವಮೂರ್ತಿಯವರು ಉಪಸ್ಥಿತರಿದ್ದರು. ಶ್ರೀ ಸುಮಂತ್ ರವರು ಪ್ರಾರ್ಥಿಸಿದರು. ಪ್ರಾಂಶುಪಾಲರಾದ ಪ್ರೊ ಎಂ ಮಹದೇವಪ್ಪ ರವರು ಸ್ವಾಗತಿಸಿದರು. ಶ್ರೀಮತಿ ನವ್ಯಶ್ರೀ ರವರು ವಂದಿಸಿದರು ಹಾಗೂ ಡಾ. ರಮ್ಯಶ್ರೀ ರವರು ನಿರೂಪಿಸಿದರು. ವಿವಿಧ ಕಾಲೇಜುಗಳಿಂದ ಸುಮಾರು 150 ಅಧ್ಯಾಪಕರು ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದ್ದರು.

ಪ್ರಾಂಶುಪಾಲರು
(ಪ್ರೊ ಎಂ ಮಹದೇವಪ್ಪ)
ಪ್ರಾಚಾರ್ಯರು
ಜೆಎಸ್‌ಎಸ್ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಕಾಲೇಜು
(ಸ್ವಾಯತ್ತ)
ಊಟಿ ರಸ್ತೆ, ಮೈಸೂರು-570 025.

ಗೆ
ಸಂಪಾದಕರು
---------------
---------------